ಇಲಾಖೆ / ವಿಷಯ: DEPARTMENT / SUBJECT: ವಿಧಾನ ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯ ಕರ್ನಾಟಕ     ದಿನಾಂಕ : DATE : 11/07/2019

**ಸುಪ್ರೀಂಕೋರ್ಟ್‌ಗೆ ಮೊರೆ ಹೋದ ಅತೃಪ್ತ ಶಾಸಕರು**

# ಸಮ್ಮಿಶ್ರ ಸರಕಾರ ಉಳಿವಿಗೆ ಸ್ಪೀಕರ್ ಪ್ರಯತ್ನ: ದೂರು

■ **ವಿಕ ಸುದ್ದಿಲೋಕ** ಬೆಂಗಳೂರು

ಅಲ್ಪಮತಕ್ಕೆ ಕುಸಿದಿರುವ ಕರ್ನಾಟಕ ಸರಕಾರವನ್ನು ಉಳಿಸಲು ಸ್ಪೀಕರ್ ಪಕ್ಷಪಾತಿಯಾಗಿ ನಡೆದುಕೊಳ್ಳುತ್ತಿದ್ದಾರೆ ಎಂದು ಅತೃಪ್ತ ಶಾಸಕರು ಸುಪ್ರೀಂಕೋರ್ಟ್‌ಗೆ ಸಲ್ಲಿಸಿರುವ ಅರ್ಜಿಯಲ್ಲಿ ದೂರಿದ್ದಾರೆ. ತಮ್ಮ ರಾಜೀನಾಮೆ ಅಂಗೀಕರಿಸುವಂತೆ ಸ್ಪೀಕರ್‌ಗೆ ನಿರ್ದೇಶನ ನೀಡುವಂತೆ ಕೋರಿ 10 ಶಾಸಕರು ಸಲ್ಲಿಸಿರುವ ಅರ್ಜಿ ಗುರುವಾರ ವಿಚಾರಣೆಗೆ ಬರಲಿದೆ.



ಈ ಅರ್ಜಿಯನ್ನು ತುರ್ತಾಗಿ ವಿಚಾರಣೆಗೆ ಕೈಗೆತ್ತಿಕೊಳ್ಳಬೇಕೆಂದು ಹಿರಿಯ ನ್ಯಾಯವಾದಿ ಮುಕುಲ್ ರೋಹಟಗಿ ಸಿಜೆ ರಂಜನ್ ಗೊಗೊಯ್ ನೇತೃತ್ವದ ನ್ಯಾಯಪೀಠದ ಮುಂದೆ ಬುಧವಾರ ಮನವಿ ಮಾಡಿದರು. ಮನವಿಯನ್ನು ಮಾನ್ಯ ಮಾಡಿದ ಸಿಜೆಐ ಹಾಗೂ ನ್ಯಾಯಮೂರ್ತಿಗಳಾದ ದೀಪಕ್ ಗುಪ್ತಾ ಮತ್ತು ಅನಿರುದ್ಧ್ ಬೋಸ್ ಅವರಿದ್ದ ತ್ರಿಸದಸ್ಯ ಪೀಠ ಅರ್ಜಿಯನ್ನು ಗುರುವಾರ ವಿಚಾರಣೆಗೆ ಕೈಗೆತ್ತಿಕೊಳ್ಳುವುದಾಗಿ ಹೇಳಿದೆ.

ಹಿರಿಯ ನ್ಯಾಯವಾದಿ ಮುಕುಲ್ ರೋಹಟಗಿ, ''ಕರ್ನಾಟಕದಲ್ಲಿ 13 ಶಾಸಕರು ತಮ್ಮ ಸ್ವ ಇಚ್ಛೆಯಿಂದ ವಿಧಾನಸಭೆ ಸದಸ್ಯ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಆದರೆ ಸ್ಪೀಕರ್ ಆ ರಾಜೀನಾಮೆಯನ್ನು ಅಂಗೀಕರಿಸುತ್ತಿಲ್ಲ. ಕಾನೂನು ಪ್ರಕಾರ ಅವರಿಗೆ ರಾಜೀನಾಮೆ ಪತ್ರ ಅಂಗೀಕಾರ ಮಾಡುವಂತೆ ನಿರ್ದೇಶನ ನೀಡಬೇಕು'' ಎಂದು ಮನವಿ ಮಾಡಿದರು.

## ಕರ್ನಾಟಕದಲ್ಲಿ ದುರಾಡಳಿತವಿದೆ

ಮೈತ್ರಿ ಸರಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ರಾಜ್ಯದಲ್ಲಿ ದುರಾಡಳಿತ ತಾಂಡವವಾಡುತ್ತಿದೆ. ಇತ್ತೀಚಿನ ದಿನಗಳಲ್ಲಿ ಸರಕಾರ ಹಲವು ಹಗರಣಗಳಲ್ಲಿ ಸಿಲುಕಿದೆ. ಐಎಂಎ ಹಗರಣದಲ್ಲಿ ಸರಕಾರದ ಹಲವು ಪ್ರಭಾವಿ ವ್ಯಕ್ತಿಗಳೇ ಭಾಗಿಯಾಗಿದ್ದಾರೆ. ಜೆಎಸ್ ಡಬ್ಲ್ಯೂಗೆ ಭೂಮಿ ಮಂಜೂರು ಮಾಡಿರುವ ಹಗರಣದಲ್ಲಿ ಸಾರ್ವಜನಿಕ ಅಭಿಪ್ರಾಯಕ್ಕೆ ವಿರೋಧವಾಗಿ ಕಡಿಮೆ ಬೆಲೆಗೆ ಭೂಮಿಯನ್ನು ನೀಡಲಾಗುತ್ತಿದೆ, ಈ ಎಲ್ಲ ದುರಾಡಳಿತಕ್ಕೆ ಬೇಸತ್ತು ಶಾಸಕರು ರಾಜೀನಾಮೆ ನೀಡಿದ್ದಾರೆ ಎಂದು ಅರ್ಜಿಯಲ್ಲಿ ಹೇಳಲಾಗಿದೆ. ಪ್ರತಾಪ್ ಗೌಡ ಪಾಟೀಲ್, ಬೈರತಿ ಬಸವರಾಜು, ಎಸ್.ಟಿ. ಸೋಮಶೇಖರ್, ಬಿ.ಸಿ.ಪಾಟೀಲ್, ರಮೇಶ್ ಜಾರಕಿಹೊಳಿ, ಶಿವರಾಮ್ ಹೆಬ್ಬಾರ್, ಮಹೇಶ್ ಕಮಟಳ್ಳಿ, ಕೆ.ಗೋಪಾಲಯ್ಯ, ನಾರಾಯಣಗೌಡ, ಎ.ಎಚ್.ವಿಶ್ವನಾಥ್ ಸುಪ್ರೀಂಕೋರ್ಟ್ ಮೆಟ್ಟಿಲೇರಿರುವ ಶಾಸಕರು.

**ಸ್ಪೀಕರ್ ಪಕ್ಷಪಾತ ಧೋರಣೆ:** ಅರ್ಜಿಯಲ್ಲಿ ಶಾಸಕರ ರಾಜೀನಾಮೆಯನ್ನು ಅಂಗೀಕರಿಸುವಂತೆ ಸ್ಪೀಕರ್‌ಗೆ ನೇಮಕ ನಿರ್ದೇಶನ ನೀಡಬೇಕು, ತಮ್ಮನ್ನು ಅನರ್ಹಗೊಳಿಸದಂತೆ ಸ್ಪೀಕರ್‌ಗೆ ನಿರ್ಬಂಧ ವಿಧಿಸಬೇಕು ಎಂದು ಅರ್ಜಿಯಲ್ಲಿ ಕೋರಲಾಗಿದೆ.

5